ಸಾಕ್ಷಿಗೆ ಕ್ರಮಬದ್ಧವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಖ್ಯ ವಿಚಾರಣೆ ಅರ್ಜಿದಾರರ ಪರ ವಕೀಲರಿಂದಃ-

ನಾನು ಈಗ ಹಾಜರುಪಡಿಸಿದ ಪ್ರಮಾಣ ಪತ್ರವನ್ನು ನನ್ನ ಮುಖ್ಯ ವಿಚಾರಣೆಯನ್ನಾಗಿ ಪರಿಗಣಿಸಲು ಕೋರುತ್ತೇನೆ. ಪ್ರಮಾಣ ಪತ್ರದಲ್ಲಿನ ಎಲ್ಲಾ ಅಂಶಗಳು ಸತ್ಯವಾಗಿವೆ ಮತ್ತು ಅದರಲ್ಲಿ ನನ್ನ ಸಹಿ ಇರುತ್ತದೆ ಎಂದು ಪ್ರಮಾಣೀಕರಿಸುತ್ತೇನೆ.

ಪ್ರಥಮ ವರ್ತಮಾನ ವರದಿಯ ದೃಢೀಕೃತ ನಕಲನ್ನು ನಿಪಿ-1 ಎಂದು, ದೂರಿನ ದೃಢೀಕೃತ ನಕಲನ್ನು ನಿಪಿ-2 ಎಂದು, ದೋಷಾರೋಪಣಾ ಪಟ್ಟಿಯ ದೃಢೀಕೃತ ನಕಲನ್ನು ನಿಪಿ-3 ಎಂದು, ಸ್ಥಳ ಪಂಚನಾಮೆಯ ದೃಢೀಕೃತ ನಕಲನ್ನು ನಿಪಿ-4 ಎಂದು, ಶವ ತನಿಖಾ ವರದಿಯ ದೃಢೀಕೃತ ನಕಲನ್ನು ನಿಪಿ-5 ಎಂದು, ಪಿಎಂ ವರದಿಯ ದೃಢೀಕೃತ ನಕಲನ್ನು ನಿಪಿ-6 ಎಂದು, ಐಎಂವಿ ವರದಿಯ ದೃಢೀಕೃತ ನಕಲನ್ನು ನಿಪಿ-7 ಎಂದು, 1ನೇ ಅರ್ಜಿದಾರರ ನೋಟರಿಕೃತ ಆಧಾರ್ ಗುರುತಿನ ಚೀಟಿಯನ್ನು ಹಾಜರುಪಡಿಸಿದ್ದು ಅದನ್ನು ಅಸಲುಪ್ರತಿಯೊಂದಿಗೆ ತಾಳೆ ಮಾಡಿ ನೋಟರಿ ಪ್ರತಿಯನ್ನು ನಿಪಿ-8 ಎಂದು, 2ನೇ ಅರ್ಜಿದಾರರ ನೋಟರಿಕೃತ ಆಧಾರ್ ಗುರುತಿನ ಚೀಟಿಯನ್ನು ಹಾಜರುಪಡಿಸಿದ್ದು ಅದನ್ನು ಅಸಲು ಪ್ರತಿಯೊಂದಿಗೆ ತಾಳೆ ಮಾಡಿ ನೋಟರಿ ಪ್ರತಿಯನ್ನು ನಿಪಿ-9 ಎಂದು, 3ನೇ ಅರ್ಜಿದಾರರ ನೋಟರಿಕೃತ ಆಧಾರ್ ಗುರುತಿನ ಚೀಟಿಯನ್ನು ಹಾಜರುಪಡಿಸಿದ್ದು ಅದನ್ನು ಅಸಲು ಪ್ರತಿಯೊಂದಿಗೆ ತಾಳೆ ಮಾಡಿ ನೋಟರಿ ಪ್ರತಿಯನ್ನು ನಿಪಿ-10 ಎಂದು, 4ನೇ ಅರ್ಜಿದಾರರ ನೋಟರಿಕೃತ ಆಧಾರ್ ಗುರುತಿನ ಚೀಟಿಯನ್ನು ಹಾಜರುಪಡಿಸಿದ್ದು ಅದನ್ನು ಅಸಲು ಪ್ರತಿಯೊಂದಿಗೆ ತಾಳೆ ಮಾಡಿ ನೋಟರಿ ಪ್ರತಿಯನ್ನು ನಿಪಿ-11 ಎಂದು, ಮೃತ ರೋಹಿನ್ ರವರ ನೋಟರಿಕೃತ ಆಧಾರ್

ಗುರುತಿನ ಚೀಟಿಯನ್ನು ಹಾಜರುಪಡಿಸಿದ್ದು ಅದನ್ನು ಅಸಲು ಪ್ರತಿಯೊಂದಿಗೆ ತಾಳೆ ಮಾಡಿ ನೋಟರಿ ಪ್ರತಿಯನ್ನು ನಿಪಿ-12 ಎಂದು ಗುರುತಿಸಲಾಯಿತು.

ಪಾಟೀ ಸವಾಲು 2ನೇ ಎದುರುದಾರರ ಪರ ವಕೀಲರಿಂದಃ-

ಎದುರುದಾರರು ಮತ್ತು ಅವರ ಪರ ವಕೀಲರನ್ನು ಕರೆಸಲಾಗಿ ಗೈರು ಹಾಜರಾಗಿರುವ ಕಾರಣ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ಬಹಿರಂಗ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಗಣಕೀಕರಿಸಿದೆ)

(ಸಾಕ್ಷಿಗೆ ಸಾಕ್ಷ್ಯವನ್ನು ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದ್ದಾರೆ)

(ನಿವೇದಿತ ಟಿ.ಎಂ.)
ರಾಮನಗರದ ಮೋಟಾರು ವಾಹನಗಳ ಅಪಘಾತದ
ಪರಿಹಾರಗಳ ಹೆಚ್ಚುವರಿ ನ್ಯಾಯಾ ಮಂಡಳಿಯ
ಪೀಠಾಧಿಕಾರಿಗಳು